**Bangalore**
**Regional News**
**23.10.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ಶೀಘ್ರವೇ ನಾಲ್ಕು ಸಾವಿರದ ೬೦೦ ಪೊಲೀಸ್ ಪೇದೆಗಳ ಹುದ್ದೆಗೆ ಅಧಿಸೂಚನೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್
2. ಬೆಂಗಳೂರಿನಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಕೆಲವೇ ದಿನಗಳಲ್ಲಿ ಎಎಐ ವರದಿ ಲಭ್ಯ - ಸಚಿವ ಎಂ.ಬಿ. ಪಾಟೀಲ್
3. ಡಿಸೆಂಬರ್ ಮೊದಲ ವಾರದಲ್ಲಿ ಮಾನವರಹಿತ ಗಗನಯಾನ ಪರೀಕ್ಷಾರ್ಥ ಉಡಾವಣೆ - ಇಸ್ರೋ ಸ್ಪಷ್ಟನೆ
4. ನವೆಂಬರ್‌ನಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಗಮನಾರ್ಹ ಬದಲಾವಣೆ - ಪ್ರತಿಪಕ್ಷ ನಾಯಕ ಆರ್. ಅಶೋಕ ಅಭಿಮತ
5. ಮೈಸೂರಿನಲ್ಲಿ ಭ್ರೂಣಹತ್ಯೆ ಜಾಲ ಪತ್ತೆ; ಆರೋಗ್ಯಾಧಿಕಾರಿಗಳಿಂದ ಪರಿಶೀಲನೆ

<><><><>

ಪೊಲೀಸ್ ಇಲಾಖೆಯಲ್ಲಿ ೪ ಸಾವಿರದ ೬೦೦ ಪೊಲೀಸ್ ಕಾನ್‌ಸ್ಟೆಬಲ್ ಹುದ್ದೆಗೆ ಅಧಿಸೂಚನೆ ಹೊರಬೀಳಲಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಜಿ. ಪರಮೇಶ್ವರ್ ಈ ಕುರಿತ ಕಡತವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ಕಳುಹಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****ಧ್ವನಿ **** ಜಿ. ಪರಮೇಶ್ವರ್

ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರಾಧಿಕಾರಿ ಸತೀಶ್ ಜಾರಕಿಹೊಳಿ ಎಂದು ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿರುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದ್ದಾರೆ. ಸತೀಶ್ ಜಾರಕಿಹೊಳಿ ಈ ಹಿಂದೆ ಅಹಿಂದಾ ಚಳವಳಿಯಲ್ಲಿದ್ದರು. ಈ ಹಿನ್ನೆಲೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಯತೀಂದ್ರ ಅವರು ಹೇಳಿಕೆ ನೀಡಿರಬಹುದು ಎಂದು ಸಮರ್ಥಿಸಿಕೊಂಡಿದ್ದಾರೆ. ಮುಖ್ಯಮಂತ್ರಿ ರೇಸ್‌ನಲ್ಲಿ ತಮ್ಮ ಹೆಸರಿರುವ ಕುರಿತಂತೆ ಪ್ರತಿಕ್ರಿಯಿಸಿ, ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಹೇಳಿದ್ದಾರೆ.

<><><><>

ಬೆಂಗಳೂರಿನಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ ಸಂಬಂಧ ಸರ್ಕಾರ ಗುರುತಿಸಿರುವ ಮೂರು ಸ್ಥಳಗಳನ್ನು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದ ಉನ್ನತ ಮಟ್ಟದ ತಂಡ ಪರಿಶೀಲನೆ ನಡೆಸಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಎಂ.ಬಿ. ಪಾಟೀಲ್, ಕೆಲವೇ ದಿನಗಳಲ್ಲಿ ಪ್ರಾಧಿಕಾರ ವರದಿ ನೀಡಲಿದೆ ಎಂದು ತಿಳಿಸಿದ್ದಾರೆ.

ಅವರು ನೀಡುವ ಅಭಿಪ್ರಾಯದ ಆಧಾರದ ಮೇಲೆ ಪರಿಣಿತರ ತಂಡಕ್ಕೆ ಕಾರ್ಯಗತಗೊಳಿಸಲು ಸಾಧ್ಯತಾ ವರದಿ ಸಿದ್ಧಪಡಿಸುವಂತೆ ತಿಳಿಸಲಾಗುವುದು. ಪರಿಣಿತರ ತಂಡದ ಅಭಿಪ್ರಾಯವನ್ನು ಸಂಪುಟ ಸಭೆಯಲ್ಲಿ ಚರ್ಚಿಸಿ ಅನುಮೋದನೆ ಪಡೆಯಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಮಾನವರಹಿತ ಗಗನಯಾನ ಉಡಾವಣೆಯ ಕಾರ್ಯ ಶೇಕಡ ೯೦ರಷ್ಟು ಪೂರ್ಣಗೊಂಡಿದೆ ಎಂದು ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರೀಕ್ಷಾ ಹಾರಾಟ ಮಿಷನ್ ಜಿ-೧ ಡಿಸೆಂಬರ್ ಮೊದಲ ವಾರದಲ್ಲಿ ಉಡಾವಣೆಗೆ ಸಜ್ಜಾಗಿದೆ ಎಂದು ಹೇಳಿದ್ದಾರೆ. ಎಸ್ಕೇಪ್ ಸಿಸ್ಟಮ್, ಪ್ಯಾರಾಚೂಟ್ ಮಾಡ್ಯೂಲ್, ಸಂವಹನ ವ್ಯವಸ್ಥೆಗಳು ಮತ್ತು ಇತರ ವ್ಯವಸ್ಥೆಗಳೊಂದಿಗೆ ಕ್ರ್ಯೂ ಮಾಡಲ್ ಪರೀಕ್ಷೆಗಳು ಯಶಸ್ವಿಯಾಗಿದ್ದು, ವ್ಯೋಮಮಿತ್ರ ಹ್ಯುಮನಾಯ್ಡ್ ಡಿಸೆಂಬರ್‌ನಲ್ಲಿ ಭೂಮಿಯ ಕೆಳಕಕ್ಷೆಗೆ ಹಾರಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾನವಸಹಿತ ಗಗನಯಾನದಲ್ಲಿ ಮೂವರು ಭಾರತೀಯ ಗಗನಯಾತ್ರಿಗಳು ೨೦೨೭ಕ್ಕೆ ಬಾಹ್ಯಾಕಾಶಕ್ಕೆ ಪ್ರಯಾಣಿಸಲಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗುವುದನ್ನು ತಡೆಯಲು ಸಿದ್ದರಾಮಯ್ಯ ಬಣ ಸಂಚು ರೂಪಿಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಬಾರದು ಎಂಬ ಹಿನ್ನೆಲೆಯಲ್ಲಿ ಪುತ್ರ ಯತೀಂದ್ರ ಮೂಲಕ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ದೂರಿದ್ದಾರೆ. ನವೆಂಬರ್‌ನಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಗಮನಾರ್ಹ ಬದಲಾವಣೆಗಳು ಆಗಲಿವೆ ಎಂದು ತಿಳಿಸಿದ್ದಾರೆ.

<><><><>

ಮೈಸೂರಿನಲ್ಲಿ ಭ್ರೂಣಹತ್ಯೆ ಜಾಲ ಪತ್ತೆಯಾಗಿದೆ. ಬನ್ನೂರು ಹೈವೇ ಬಳಿಯ ಹುಣಗನಹಳ್ಳಿಯ ಐಷಾರಾಮಿ ಫಾರಂ ಹೌಸ್‌ನಲ್ಲಿ ಲಿಂಗ ಭ್ರೂಣ ಪತ್ತೆ ಕಾರ್ಯ ನಡೆಯುತ್ತಿರುವುದನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ರಹಸ್ಯ ಕಾರ್ಯಾಚರಣೆ ಮೂಲಕ ಪತ್ತೆಹಚ್ಚಿ, ಭ್ರೂಣ ಹಂತಕರನ್ನು ಸೆರೆಹಿಡಿದಿದ್ದಾರೆ. ಓರ್ವ ಮಹಿಳೆ ಸೇರಿ ೬ ಮಂದಿಯ ವಿರುದ್ಧ ಪ್ರಕರಣ ದಾಖಲಾಗಿದೆ. ಗರ್ಭಿಣಿಯರ ಸಹಾಯ ಪಡೆದು ಲಿಂಗ ಭ್ರೂಣ ಪತ್ತೆ ಕಾರ್ಯಚಟುವಟಿಕೆ ನಡೆಸುತ್ತಿರುವುದನ್ನು ಪತ್ತೆ ಮಾಡಲಾಗಿದೆ. ಕಾರ್ಯಾಚರಣೆ ವೇಳೆ ನಾಲ್ವರು ಗರ್ಭಿಣಿ ಸ್ತ್ರೀಯರು ಲಿಂಗ ಭ್ರೂಣ ಪತ್ತೆ ಮಾಡಿಸಿಕೊಳ್ಳಲು ಹಾಜರಿರುವುದು ಹಾಗೂ ಸ್ಕ್ಯಾನಿಂಗ್ ಬಳಕೆ ಮಾಡುವ ಉಪಕರಣವು ಕಂಡು ಬಂದಿದೆ. ಹೆರಿಗೆ ಪೂರ್ವ ಭ್ರೂಣ ಲಿಂಗಪತ್ತೆ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಕುರಿತಂತೆ ಮಾಹಿತಿ ನೀಡಿರುವ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಕುಮಾರಸ್ವಾಮಿ, ದಾಳಿಯ ವೇಳೆ ಕೆಲವು ವೈದ್ಯಕೀಯ ಸಾಧನಗಳು ಹಾಗೂ ಔಷಧಿಗಳು ದೊರೆತಿದ್ದು, ಅವುಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಹಾಸನದಲ್ಲಿ ಕಳೆದ ೧೪ ದಿನಗಳಿಂದ ನಡೆಯುತ್ತಿದ್ದ ಹಾಸನಾಂಬ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವಕ್ಕೆ ಇಂದು ವಿದ್ಯುಕ್ತ ತೆರೆ ಬಿದ್ದಿದೆ. ಇಂದು ಮಧ್ಯಾಹ್ನ ಹಾಸನಾಂಬ ದೇವಾಲಯದ ಗರ್ಭಗುಡಿಗೆ ಬಾಗಿಲು ಹಾಕಲಾಗಿದೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಕೃಷ್ಣಭೈರೇಗೌಡ, ಜನಪ್ರತಿನಿಧಿಗಳು, ಜಿಲ್ಲಾಡಳಿತ, ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಕಾರದಿಂದ ಉತ್ಸವ ಯಶಸ್ವಿಯಾಗಿ ನಡೆದಿದ್ದು ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ ತಿಳಿಸಿದ್ದಾರೆ. ಈ ಬಾರಿ ಹಾಸನಾಂಬ ಉತ್ಸವದಲ್ಲಿ ಸುಮಾರು ೨೬ ಲಕ್ಷದ ೧೩ ಸಾವಿರ ಭಕ್ತರು ದೇವರ ದರ್ಶನ ಪಡೆದಿದ್ದು, ೮೨ ಲಕ್ಷ ಟಿಕೆಟ್ ಮಾರಾಟದಿಂದ ೨೧ ಕೋಟಿ ರೂಪಾಯಿ ಆದಾಯ ಬಂದಿದೆ, ಹುಂಡಿ ಎಣಿಕೆ ಸೇರಿ ಅಂದಾಜು ೨೫ ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿದೆ ಎಂದು ಹೇಳಿದ್ದಾರೆ. ಮುಂದಿನ ವರ್ಷ ಅಕ್ಟೋಬರ್ ೨೯ ರಿಂದ ನವೆಂಬರ್ ೧೧ರ ವರೆಗೆ ಹಾಸನಾಂಬ ದೇವಿ ಗರ್ಭಗುಡಿ ಬಾಗಿಲು ತೆರೆಯಲಿದೆ.

<><><><>

ರಾಜ್ಯದ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಲ್ಲಿ ನಿರಂತರ ಮಳೆಯಾಗುತ್ತಿದ್ದು, ಇದೇ ೨೬ರ ವರೆಗೆ ಅರಬ್ಬೀ ಸಮುದ್ರದಲ್ಲಿ ಭಾರೀ ಗಾಳಿ ಬೀಸುವ ಸಾಧ್ಯತೆ ಇರುವುದರಿಂದ ಮೀನುಗಾರರು ಹಾಗೂ ಪ್ರವಾಸಿಗರು ಸಮುದ್ರ ತೀರದತ್ತ ತೆರಳದಂತೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ. ಕೊಡಗು ಜಿಲ್ಲೆಯ ನದಿ ಪಾತ್ರದಲ್ಲಿ ಭಾರೀ ಮಳೆಯಿಂದಾಗಿ ಅಕ್ಟೋಬರ್ ತಿಂಗಳಲ್ಲೂ ಹಾರಂಗಿ ಜಲಾಶಯ ಮತ್ತೆ ಭರ್ತಿಯಾಗಿದೆ.

ಇತಿಹಾಸದಲ್ಲಿಯೇ ಮೊದಲ ಬಾರಿಗೆ ಅಕ್ಟೋಬರ್‌ನಲ್ಲಿ ಹಾರಂಗಿ ಜಲಾಶಯ ಭರ್ತಿಯಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ನದಿಗೆ ಹೆಚ್ಚುವರಿ ನೀರು ಬಿಡುಗಡೆ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹವಾಮಾನ ಇಲಾಖೆಯ ವರದಿಯ ಪ್ರಕಾರ ಮಂಡ್ಯ ಜಿಲ್ಲೆಯಲ್ಲಿ ಇನ್ನೂ ಮೂರ್ನಾಲ್ಕು ದಿನಗಳ ಕಾಲ ಮಳೆ ಮುಂದುವರಿಯಲಿದೆ. ಈ ಸಂದರ್ಭದಲ್ಲಿ ಅಧಿಕಾರಿಗಳು ವಿಪತ್ತು ನಿರ್ವಹಣೆಯ ಕುರಿತು ಅಗತ್ಯ ಕ್ರಮ ಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಕೊಡಗಿನಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಹೇಮಾವತಿ ಜಲಾಶಯದಿಂದ ಕೃಷ್ಣರಾಜಸಾಗರ ಜಲಾಶಯಕ್ಕೆ ೪ ಸಾವಿರದ ೬೦೦ ಕ್ಯೂಸೆಕ್ ನೀರು ಬಿಡಲಾಗಿದೆ, ಕಾವೇರಿ ನದಿಪಾತ್ರದಲ್ಲಿ ವಿಪತ್ತು ನಿರ್ವಹಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ಅಕ್ಟೋಬರ್ ತಿಂಗಳಿನಲ್ಲಿ ಸುರಿದ ಬಾರಿ ಮಳೆಯಿಂದ ಪಾಲಾರ್ ನದಿ ಕೋಡಿ ಹೋಗುವ ಸ್ಥಳಗಳಾದ ಬೇತಮಂಗಲ ಗ್ರಾಮದ ಕೆರೆ, ಕೋಡಿಹಳ್ಳಿ ಗ್ರಾಮದ ಕೆರೆ ಹಾಗೂ ಕ್ಯಾಸಂಬಳ್ಳಿ ಹೋಬಳಿಯ ರಾಮಸಾಗರ ಗ್ರಾಮದ ಕೆರೆಗಳು ತುಂಬಿ ಹರಿಯುತ್ತಿದೆ. ಈ ಪ್ರದೇಶಗಳಲ್ಲಿ ಸಾರ್ವಜನಿಕರ ಸಂಚಾರ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಪಾಲಾರ್ ನದಿ ಹರಿಯುವ ಸ್ಥಳದಲ್ಲಿ ಬಿರುಕು ಬಿಟ್ಟಿರುವ ಗೇಟ್ ಪಿಲ್ಲರ್‌ಗಳನ್ನು ಶೀಘ್ರದಲ್ಲೇ ತಾಂತ್ರಿಕ ತಂಡ ಪರಿಶೀಲಿಸಲಿದ್ದು, ವರದಿ ನೀಡಿದ ಬಳಿಕ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಂದು ಮಳೆಯ ಪ್ರಮಾಣ ಕಡಿಮೆ ಆಗಿದೆ. ಆದರೂ ಕಡೂರು ತಾಲೂಕಿನಲ್ಲಿ ವೇದಾವತಿ, ಕುಂತಿ ಹೊಳೆ ನದಿಗಳು ತುಂಬಿ ಹರಿಯುತ್ತಿದ್ದು ಹಲವೆಡೆ ನದಿ ಪಕ್ಕದ ಅಡಿಕೆ, ತೆಂಗಿನ ತೋಟಗಳು ಜಲಾವೃತಗೊಂಡಿವೆ. ಬೀರೂರು, ಕಡೂರು, ಅಜ್ಜಂಪುರ ವ್ಯಾಪ್ತಿಯಲ್ಲಿ ಈರುಳ್ಳಿ ಹಾಗು ತರಕಾರಿ ಬೆಳೆಗಳಿಗೆ ಹಾನಿಯುಂಟಾಗಿದೆ.

<><><>

ದಕ್ಷಿಣ ಒಳನಾಡಿನಲ್ಲಿ ಈಶಾನ್ಯ ಮುಂಗಾರು ತೀವ್ರವಾಗಿದ್ದು, ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ಸಕ್ರಿಯವಾಗಿದ್ದು, ರಾಜ್ಯಾದ್ಯಂತ ಹೆಚ್ಚಿನ ಸ್ಥಳಗಳಲ್ಲಿ ಮಳೆಯಾಗಿದೆ. ಧರ್ಮಸ್ಥಳದಲ್ಲಿ ೧೩ ಸೆಂಟಿಮೀಟರ್, ಚಿಕ್ಕಮಗಳೂರಿನ ಕೊಟ್ಟಿಗೆಹಾರದಲ್ಲಿ ೧೨ ಸೆಂಟಿಮೀಟರ್ ಮಳೆಯಾಗಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಜಿಲ್ಲೆಗಳ ಹಲವೆಡೆ ಇಂದು ಗುಡುಗು ಸಹಿತ ಮಳೆಯಾಗಲಿದೆ. ಚಿಕ್ಕಮಗಳೂರು, ಶಿವಮೊಗ್ಗ, ಮಂಡ್ಯ, ಮೈಸೂರು, ರಾಮನಗರ ಹಾಗೂ ಬೆಂಗಳೂರು ನಗರದಲ್ಲಿ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

ರಾಜ್ಯದ ವಿವಿಧೆಡೆ ಇಂದು ಕಿತ್ತೂರು ರಾಣಿ ಚೆನ್ನಮ್ಮ ಉತ್ಸವ ಆಚರಿಸಲಾಯಿತು. ರಾಣಿ ಚೆನ್ನಮ್ಮ ಅವರ ಸಮಾಜಮುಖಿ ಹೋರಾಟ ದೇಶದ ಸ್ವಾತಂತ್ರ್ಯಕ್ಕೆ ಮುನ್ನುಡಿ ಹಾಕಿದೆ ಎಂದು ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ನಾಡಿನ ಸಂಸ್ಕೃತಿ, ಪರಂಪರೆ, ಇತಿಹಾಸವನ್ನು ಕಟ್ಟಿ ಕೊಟ್ಟ ಕೀರ್ತಿ ಕಿತ್ತೂರು ರಾಣಿ ಚನ್ನಮ್ಮ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದ್ದಾರೆ. ವೀರರಾಣಿ ಕಿತ್ತೂರು ಚನ್ನಮ್ಮ ಸ್ವಾಭಿಮಾನದ ಪ್ರತೀಕ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಬ್ರಿಟೀಷರೊಂದಿಗೆ ಧೈರ್ಯ, ಶೌರ್ಯದಿಂದ ಹೋರಾಡಿದ ವೀರಮಾತೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ. ರಾಣಿಚನ್ನಮ್ಮ ಅವರ ಧೈರ್ಯ, ಶೌರ್ಯ, ಸ್ವಾಭಿಮಾನ ನಮ್ಮೆಲ್ಲರಿಗೂ ಸ್ಫೂರ್ತಿದಾಯಕ ಎಂದು ಅಭಿಪ್ರಾಯಪಟ್ಟಿದ್ದಾರೆ. ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಿಟಿಷರ ವಿರುದ್ಧ ಹೋರಾಡಿದ ಕಿತ್ತೂರು ರಾಣಿ ಚೆನ್ನಮ್ಮ ತೋರಿದ ಧೈರ್ಯ, ಶೌರ್ಯ ಹಾಗೂ ಸಾಹಸ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದು ವಿಜಯಪುರದಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ತಿಳಿಸಿದ್ದಾರೆ.

<><><><>

ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ರಾಗಿ ಖರೀದಿ ಮಾಡಲು ನೊಂದಾಯಿಸುವ ಪ್ರಕ್ರಿಯೆಯನ್ನು ಡಿಸೆಂಬರ್ ೧೫ರ ವರೆಗೆ ಮುಂದುವರಿಸಲಾಗುತ್ತಿದ್ದು, ರೈತರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಶಾಸಕ ಡಾ. ಎಚ್.ಡಿ. ರಂಗನಾಥ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>